ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ: ಇಡಿ/ಕೆಇಎ/ತಿದ್ದುಪಡಿ-ಸಿಇಟಿ ಅರ್ಜಿ/2022 ದಿನಾಂಕ: 21-06-2022

**ಪ್ರಕಟಣೆ - ಸಿಇಟಿ-2022ಕ್ಕೆ ಆನ್ ಲೈನ್ ಮೂಲಕ ದಾಖಲಿಸಿರುವ ಮಾಹಿತಿ / ಕ್ಲೇಮ್ಸ್ ಗಳನ್ನು ತಿದ್ದುಪಡಿ ಮಾಡಿಕೊಳ್ಳಲು ಅಂತಿಮ ಅವಕಾಶ - 24-06-2022 ರಿಂದ 28-06-2022 ವರೆಗೆ**

1. ದಿನಾಂಕ 16-06-2022 ಮತ್ತು 17-06-2022 ರಂದು ಸಿಇಟಿ-2022 ರ ಪರೀಕ್ಷೆಯನ್ನು ಮತ್ತು ದಿನಾಂಕ 18-06-2022 ರಂದು ಹೊರನಾಡು ಮತ್ತು ಗಡಿನಾಡು ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆಯನ್ನು ನಡೆಸಲಾಗಿರುತ್ತದೆ. ನಿಯಮಾನುಸಾರ ಸಿಇಟಿ-2022 ರ ಫಲಿತಾಂಶವನ್ನು ಮುಂದಿನ ದಿನಗಳಲ್ಲಿ ಪ್ರಕಟಿಸಲಾಗುವುದು.
2. ಸಿಇಟಿ-2022 ರ ಫಲಿತಾಂಶ ಪ್ರಕಟಿಸುವ ಮೊದಲು ಕೊನೆಯಬಾರಿಗೆ, ಸಿಇಟಿ-2022 ಕ್ಕಾಗಿ ಆನ್ ಲೈನ್ ಮೂಲಕ ದಾಖಲಿಸಿರುವ ಮಾಹಿತಿ ತಿದ್ದುಪಡಿ ಮಾಡಿಕೊಳ್ಳಲು ಅಂತಿಮ ಅವಕಾಶ ನೀಡಲಾಗುವುದು.
3. ಸಿಇಟಿ-2022 ರ ಫಲಿತಾಂಶ ಘೋಷಣೆಯ ನಂತರ ಯಾವುದೇ ಸಂದರ್ಭದಲ್ಲಿಯೂ ಅರ್ಜಿಯಲ್ಲಿನ ಮಾಹಿತಿಯನ್ನು ತಿದ್ದುಪಡಿ ಮಾಡಿಕೊಳ್ಳಲು ಅಥವಾ ಮೀಸಲಾತಿಯನ್ನು ಕ್ಲೇಮ್ ಮಾಡಲು ಅವಕಾಶವಿರುವುದಿಲ್ಲ ಹಾಗು ಅರ್ಜಿಯಲ್ಲಿನ ಮಾಹಿತಿಗಳನ್ನು ಬದಲಾಯಿಸಿಕೊಳ್ಳಲು ಅವಕಾಶ ನೀಡುವಂತೆ ಸಲ್ಲಿಸುವ ಮನವಿಗಳನ್ನು ಪುರಸ್ಕರಿಸುವುದಿಲ್ಲ.
4. ಆದ್ದರಿಂದ ಅಭ್ಯರ್ಥಿಗಳಿಗೆ ಮತ್ತು ಪೋಷಕರಿಗೆ ಅರ್ಜಿಗಳಲ್ಲಿ ತಾವು ಮಾಡಿರುವ ಕ್ಲೇಮ್‌ಗಳನ್ನು / ಮಾಹಿತಿಯನ್ನು ತಪ್ಪದೇ ಕಡ್ಡಾಯವಾಗಿ ಪರಿಶೀಲಿಸಿಕೊಳ್ಳಲು ಸೂಚಿಸಿದೆ;
5. ಬಹು ಮುಖ್ಯವಾಗಿ ಪ್ರವರ್ಗ ಮೀಸಲಾತಿ, ವಾರ್ಷಿಕ ಆದಾಯ, ಹೈದರಾಬಾದ್ ಕರ್ನಾಟಕ ಮೀಸಲಾತಿ 371(j), ಕನ್ನಡ ಮಾಧ್ಯಮ, ಗ್ರಾಮೀಣ ಪ್ರದೇಶದ ವ್ಯಾಸಂಗ, ವಿಶೇಷ ಕ್ಯಾಟಗರಿ ಇತ್ಯಾದಿಗಳ ಬಗ್ಗೆ ನಮೂದಿಸಿರುವ ಕ್ಲೇಮ್‌ಗಳನ್ನು ಪರಿಶೀಲಿಸಿ.
6. ಉದಾ: ತಾವು 2ಎ ಮೀಸಲಾತಿ ವರ್ಗದಲ್ಲಿ ಸೀಟು ಬಯಸಲು ಅರ್ಹತೆ ಪಡೆದಿದ್ದಲ್ಲಿ, ಅರ್ಜಿಯಲ್ಲಿ ತಾವು 2ಎ ಎಂದು ನಮೂದಿಸಿರುವುದು ಕಡ್ಡಾಯವಾಗಿರುತ್ತದೆ. ಒಂದು ವೇಳೆ ತಾವು 2ಎ ವರ್ಗಕ್ಕೆ ಸೇರಿದವರಾಗಿದ್ದು ತಪ್ಪಾಗಿ ಬೇರೆ ಪ್ರವರ್ಗ ನಮೂದಿಸಿದ್ದಲ್ಲಿ, ತಾವು ದಾಖಲಾತಿ ಪರಿಶೀಲನೆಗೆ 2ಎ ವರ್ಗದ ಪ್ರಮಾಣ ಪತ್ರ ಹಾಜರು ಪಡಿಸಿದರೂ ಸಹ ತಮಗೆ 2ಎ ಮೀಸಲಾತಿ ಪಡೆಯಲು ಮಾನ್ಯ ಮಾಡುವುದಿಲ್ಲ ಮತ್ತು ಅರ್ಹತೆ ಹೊಂದುವುದಿಲ್ಲ.
7. ಅದೇ ರೀತಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, 3ಎ, 3ಬಿ, 2ಬಿ, 2ಎ, ಪ್ರವರ್ಗ-1 ಕ್ಕೆ ಅರ್ಹತೆ ಇದ್ದು, ಅರ್ಜಿ ಯಲ್ಲಿ ತಾವು ಸರಿಯಾಗಿ ತಮ್ಮ ತಮ್ಮ ವರ್ಗಗಳನ್ನು ನಮೂದಿಸದಿದ್ದಲ್ಲಿ ದಾಖಲಾತಿ ಪರಿಶೀಲನೆಗೆ ನಿಗದಿತ ಪ್ರಮಾಣ ಪತ್ರ ಹಾಜರು ಪಡಿಸಿದರೂ ಸಹ ತಮಗೆ ಮೀಸಲಾತಿ ಪಡೆಯಲು ಮಾನ್ಯ ಮಾಡುವುದಿಲ್ಲ ಮತ್ತು ಅರ್ಹತೆ ಹೊಂದುವುದಿಲ್ಲ.
8. ಅಭ್ಯರ್ಥಿಗಳು ತಾವು ಪಡೆದುಕೊಂಡಿರುವ ಜಾತಿ ಪ್ರಮಾಣ ಪತ್ರ / ಜಾತಿ ಆದಾಯದ ಪ್ರಮಾಣ ಪತ್ರದಲ್ಲಿ ನಮೂದಿತವಾಗಿರುವ ವರ್ಗವನ್ನು ಪರಿಶೀಲಿಸಿಕೊಳ್ಳಿ ಹಾಗು ತಾವು ಅರ್ಜಿಯಲ್ಲಿ ನಮೂದಿಸಿರುವ ವರ್ಗಕ್ಕೆ ತಾಳೆ ಮಾಡಿ, ಅರ್ಜಿಯಲ್ಲಿ ತಪ್ಪಾಗಿ ನಮೂದಿಸಿದ್ದಲ್ಲಿ ಸರಿಪಡಿಸಿಕೊಳ್ಳಿ.
9. ಒಂದರಿಂದ ಹತ್ತನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ, ಅರ್ಜಿಯಲ್ಲಿ ಒಂದರಿಂದ ಹತ್ತನೇ ತರಗತಿಯವರೆಗೆ ವ್ಯಾಸಂಗ ಮಾಡಿರುವ ಅಂಕಣದಲ್ಲಿ NO ಎಂದು ನಮೂದಿಸಿದ್ದಲ್ಲಿ ತಮಗೆ ಕನ್ನಡ ಮಾಧ್ಯಮದ ಮೀಸಲಾತಿ ಪಡೆಯಲು ಅರ್ಹತೆ ದೊರೆಯುವುದಿಲ್ಲ.

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in

10. ಒಂದರಿಂದ ಹತ್ತನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿ, ಅರ್ಜಿಯಲ್ಲಿ ಒಂದರಿಂದ ಹತ್ತನೇ ತರಗತಿಯವರೆಗೆ ಗ್ರಾಮೀಣ ವ್ಯಾಸಂಗ ಮಾಡಿರುವ ಅಂಕಣದಲ್ಲಿ NO ಎಂದು ನಮೂದಿಸಿದ್ದಲ್ಲಿ ತಮಗೆ ಗ್ರಾಮೀಣ ಮೀಸಲಾತಿ ಪಡೆಯಲು ಅರ್ಹತೆ ದೊರೆಯುವುದಿಲ್ಲ.

11. ಹೈದರಾಬಾದ್ ಕರ್ನಾಟಕ ಪ್ರದೇಶದ ಮೀಸಲಾತಿ 371(j) ಪಡೆಯಲು ತಾವು ಅರ್ಹರಿದ್ದಲ್ಲಿ, ಅರ್ಜಿಯಲ್ಲಿ ಹೈದರಾಬಾದ್ ಕರ್ನಾಟಕದ ಅಂಕಣದಲ್ಲಿ ತಾವು YES ಎಂದು ನಮೂದಿಸಿ ನಿಗದಿತ ಪ್ರಮಾಣ ಪತ್ರವನ್ನು ಸಲ್ಲಿಸಿದಲ್ಲಿ ಮಾತ್ರ ತಮಗೆ ಹೈದರಾಬಾದ್ ಕರ್ನಾಟಕ ಮೀಸಲಾತಿ ಪಡೆಯಲು ಅರ್ಹತೆಯನ್ನು ಪಡೆಯುತ್ತೀರ.

12. ಹಾಗೆಯೇ ಎನ್‌ಸಿಸಿ, ಕ್ರೀಡೆ, ಸಿಆರ್‌ಪಿಎಫ್, ಸಿಎಪಿಎಫ್, ಸೈನಿಕರು, ಮಾಜಿ ಸೈನಿಕರು, ಸ್ಕೌಟ್ಸ್ & ಗೈಡ್ಸ್, ವಿಕಲಚೇತನರು, ಮಾಜಿ ಸಿಎಪಿಎಫ್ ಮುಂತಾದ ವಿಶೇಷ ಪ್ರವರ್ಗಗಳಲ್ಲಿ ಅರ್ಹತೆ ಪಡೆಯಲೂ ಸಹ ತಮ್ಮ ವಿಶೇಷ ಪ್ರವರ್ಗದ ಮಾಹಿತಿಯನ್ನು ಅರ್ಜಿಯಲ್ಲಿ ನಮೂದಿಸಿರುವುದು ಅತ್ಯವಶ್ಯಕವಾಗಿರುತ್ತದೆ.

13. ಅದೇ ರೀತಿ ಕೃಷಿಕರ ಕೋಟದ ಮೀಸಲಾತಿ ಪಡೆಯಲೂ ಸಹ ಅಭ್ಯರ್ಥಿಗಳು ಕೃಷಿಕರ ಕೋಟದ ಮೀಸಲಾತಿ ಅಂಕಣದಲ್ಲಿ YES ಎಂದು ನಮೂದಿಸುವುದು ಕಡ್ಡಾಯವಾಗಿರುತ್ತದೆ.

ಈ ಹಿನ್ನಲೆಯಲ್ಲಿ ಅಭ್ಯರ್ಥಿಗಳು ಅವರ ಅರ್ಹತೆಗೆ ಅನುಗುಣವಾಗಿ ತಿದ್ದುಪಡಿ ಮಾಡಿಕೊಳ್ಳಲು ದಿನಾಂಕ **24-06-2022 ರ ಬೆ. 11.00 ರಿಂದ ದಿನಾಂಕ 28-06-2022** ರ ರಾತ್ರಿ 11.59 ರ ವರೆಗೆ ಅಂತಿಮ ಹಾಗು ಕೊನೆಯ ಅವಕಾಶವನ್ನು ಕಲ್ಪಿಸಲಾಗುವುದು.

**ತಿದ್ದುಪಡಿ ಮಾಡಿಕೊಳ್ಳಲು ಅನುಸರಿಸಬೇಕಾದ ಕ್ರಮ**

1. ಪ್ರಾಧಿಕಾರದ ವೆಬ್‌ಸೈಟಿನಲ್ಲಿ ನಿಗದಿತ ಲಿಂಕ್ ಅನ್ನು ಆಯ್ಕೆ ಮಾಡಿ ಅಭ್ಯರ್ಥಿಗಳ ಲಾಗಿನ್ ಮೂಲಕ ತಿದ್ದುಪಡಿ ಮಾಡಿಕೊಳ್ಳುವುದು.
2. ತಿದ್ದುಪಡಿ ಮಾಡಿಕೊಳ್ಳಬೇಕಾದ ಎಲ್ಲಾ ಅಂಕಣಗಳನ್ನು ಒಂದೇ ಬಾರಿ ಮಾಡಿಕೊಳ್ಳಿ. ಎಲ್ಲ ಅಂಕಣಗಳು ಸರಿಯಾಗಿ ಇದೆಯೇ ಎಂದು ಪರಿಶೀಲಿಸಿ;
3. Declaration button ಅನ್ನು ಆಯ್ಕೆ (Select) ಮಾಡುವ ಮೊದಲು ಪರಿಶೀಲಿಸಿ, ಒಂದು ಸಾರಿ Declaration button ಅನ್ನು ಆಯ್ಕೆ (Select) ಮಾಡಿದ ನಂತರ ಪುನಹ ತಿದ್ದುಪಡಿಮಾಡಿಕೊಳ್ಳಲು ಅವಕಾಶ ವಿರುವುದಿಲ್ಲ.
4. ತಿದ್ದುಪಡಿ ಮಾಡಿಕೊಂಡ ನಂತರ ತಪ್ಪದೇ Declaration button ಅನ್ನು ಆಯ್ಕೆ (Select) ಮಾಡಿ ನಂತರ Final Submission ಅನ್ನು ಸಲ್ಲಿಸಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು. ತಪ್ಪಿದಲ್ಲಿ ಅಭ್ಯರ್ಥಿಗಳು ಅರ್ಜಿಯಲ್ಲಿ ಮೊದಲು ಸಲ್ಲಿಸಿದ ಮಾಹಿತಿಯನ್ನೇ ಮುಂದಿನ ಎಲ್ಲಾ ಪ್ರಕ್ರಿಯೆಗೆ ಪರಿಗಣಿಸಲಾಗುವುದು.
5. ನಂತರ ಮಾರ್ಪಡಿಸಿದ ಅರ್ಜಿಯನ್ನು ಮುದ್ರಿಸಿ ತಮ್ಮಲ್ಲಿ ಸುರಕ್ಷಿತವಾಗಿ ಇಟ್ಟುಕೊಳ್ಳಬೇಕು. ಮುದ್ರಿತ ಅರ್ಜಿಯ ಕನಿಷ್ಟ ಐದು ಪ್ರತಿಗಳು ತಮ್ಮಲ್ಲಿ ಇರುವುದು ಸೂಕ್ತ.

ಕಾರ್ಯನಿರ್ವಾಹಕ ನಿರ್ದೇಶಕರು